# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಳಗಾವಿ ಜಿಲ್ಲೆ ಸವದತ್ತಿ ಪಟ್ಟಣದ ಸ್ಥೂಲಾಭಿವೃದ್ಧಿ ಯೋಜನೆಗೆ ಅಂತಿಮ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: 1.ಸರ್ಕಾರದ ಆದೇಶ ಸಂಖ್ಯೆ: ನಅಇ 78 ಬೆಮುಪ್ರಾ 2002, ದಿನಾಂಕ 19.9.02.

2.ಯೋಪ್ರಾ/ಪ್ರಸ/ಸವದತ್ತಿ/ಸ್ಥೂಯೋ/2003-04/2274, ದಿ:11.3.04-ಮುಖ್ಯಾಧಿಕಾರಿಗಳು, ಪುರಸಭೆ-ಸವದತ್ತಿ.

ಪ್ರಸ್ತಾವನೆ:

ಮೇಲೆ(1)ರಲ್ಲಿ ಓದಲಾದ ಆದೇಶದಲ್ಲಿ ಸವದತ್ತಿ ಪಟ್ಟಣದ ಸ್ಥೂಲಾಭಿವೃದ್ಧಿ ಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಕ್ರ.ಸಂ.(2)ರಲ್ಲಿ ಓದಲಾದ ಪತ್ರದಲ್ಲಿ ಸವದತ್ತಿ ಯೋಜನಾ ಪ್ರಾಧಿಕಾರ ಪುರಸಭೆ ಇವರು ಬೆಳಗಾವಿ ಜಿಲ್ಲೆ ಸವದತ್ತಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಸ್ಥೂಲಾಭಿವೃದ್ಧಿ ಯೋಜನೆಯನ್ನು ತಯಾರಿಸಿ ಅಂತಿಮ ಅನುಮೋದನೆಗೆ ಸಲ್ಲಿಸುವ ಮೊದಲು ಸವದತ್ತಿ ಪುರಸಭೆ ಮತ್ತು ಯೋಜನಾ ಪ್ರಾಧಿಕಾರವು ಕರ್ನಾಟಕ ನಗರ ಮತ್ತು ಗ್ರಾಮೀಣ ಯೋಜನಾ ಕಾಯಿದೆ 1961 ರನ್ವಯ ಸಾರ್ವಜನಿಕರಿಂದ ಸಲಹೆ ಆಕ್ಷೇಪಣೆ ಆಹ್ವಾನಿಸಿದ್ದು ಈ ಕುರಿತು ಬಂದ ಸಲಹೆ; ಸೂಚನೆಯನ್ನು ದಿನಾಂಕ:7.8.2003 ರಂದು ಜರುಗಿದ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ ಸೂಕ್ತವೆನಿಸಿರುವುದನ್ನು ಸ್ಥೂಲಾಭಿವೃದ್ಧಿ ಯೋಜನೆಯಲ್ಲಿ ಅಳವಡಿಸಿ ಯೋಜನೆಯನ್ನು ಅಂತಿಮ ಅನುಮೋದನೆಗೆ ಸಲ್ಲಿಸಲು ಸಭೆಯಲ್ಲಿ ನಿರ್ಣಯ ಕೈಗೊಂಡಿರುತ್ತದೆ.

ಸವದತ್ತಿ ಪಟ್ಟಣದ ಸ್ಥೂಲಾಭಿವೃದ್ಧಿ ಯೋಜನೆಯನ್ನು 2021ರ ಇಸ್ವಿಗೆ ಆಯೋಜಿಸಲಾದ 75,000 ಜನಸಂಖ್ಯೆಗೆ ತಯಾರಿಸಲಾಗಿದ್ದು, ಯೋಜನೆಯು ಅಭಿವೃದ್ಧಿಗಾಗಿ ಒಟ್ಟು 750ಹೆಕ್ಟೇರ್ ಪ್ರದೇಶವು ಬೇಕಾಗಬಹುದೆಂದು ಅಂದಾಜು ಮಾಡಲಾಗಿದ್ದು, ಸ್ಥಳೀಯ ಯೋಜನಾ ಪ್ರದೇಶದ ವಿಸ್ತೀರ್ಣವು 16.00ಚದರ ಕಿಲೋ ಮೀಟರ್ ಹಾಗೂ ಪ್ರಸ್ತಾಪಿತ ನಗರೀಕರಣ ವಿಸ್ತೀರ್ಣ 7.50ಚ.ಕಿ.ಮೀ. ಇರುತ್ತದೆ. ಸವದತ್ತಿ ಪಟ್ಟಣದ ಜನಸಂಖ್ಯೆಯ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹವಾಗುಣ, ರಸ್ತೆಗಳ ಹಾಲಿ ಪರಿಚಲನ, ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ ಯೋಜನಾ ತತ್ವ ಹಾಗೂ ಸ್ಥೂಲಾಭಿವೃದ್ಧಿ ಯೋಜನೆ ತಯಾರಿಕೆ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಪ್ರಕರಣ (12)ರಲ್ಲಿ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಬೆಳವಣಿಗೆಗೆ ವಿವಿಧ ಉಪಯೋಗಗಳಿಗೆ ಬೇಕಾಗಬಹುದಾದ ಭೂಮಿಯನ್ನು ಕಾಯ್ದಿರಿಸಿ, ಸ್ಥೂಲಾಭಿವೃದ್ಧಿ ಯೋಜನೆಯನ್ನು ರೂಪಿಸಲಾಗಿದೆ ಹಾಗೂ ಸ್ಥೂಲಾಭಿವೃದ್ಧಿ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರಚಿಸಲಾಗಿದೆ. ಕೆ.ಟಿ.ಸಿ.ಪಿ. ಕಾಯ್ದೆ 1961 ಕಲಂ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆ ನೀಡುವಂತೆ ನಗರ ಯೋಜನಾ ನಿರ್ದೇಶಕರು ಕಡತ ಸಂಖ್ಯೆ:

ನಯೋ(8)ಬೆ:ಸವದತ್ತಿ:ಸ್ಥಾಅಯೋ:ಅಂಅ:506:2003,ದಿ:12.4.2004ರಲ್ಲಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದಾರೆ.

ಈ ವಿಷಯವನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ.ನಅಇ143ಬೆಮಪ್ರಾ 2004, ಬೆಂಗಳೂರು, ದಿ:4.2.2005.</u>

ಸವದತ್ತಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಸ್ಥೂಲಾಭಿವೃದ್ಧಿ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆ ನೀಡಿದೆ.

ಸ್ಥೂಲಾಭಿವೃದ್ಧಿ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಶ್ರೀಧರಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಗೆ.

1.ಜಿಲ್ಲಾಧಿಕಾರಿಗಳು, ಬೆಳಗಾಂ ಜಿಲ್ಲೆ, ಬೆಳಗಾಂ.
2.ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
3.ಮುಖ್ಯಾಧಿಕಾರಿಗಳು, ಯೋಜನಾ ಪ್ರಾಧಿಕಾರ, ಪುರಸಭೆ.ಸವದತ್ತಿ,ಸವದತ್ತಿ ತಾ: ಬೆಳಗಾಂ ಜಿಲ್ಲೆ.
4.ವಾರದ ರಾಜ್ಯ ಪತ್ರ.
5.ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

563
11-2-05